ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:1251/2021

ಚಾಸಾ:5 ಪ್ರಾಸಾ:5

ದಿನಾಂಕ: 23.07.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ರಾಜು |
| ತಂದೆಯ ಹೆಸರು | : | ಕುಪ್ಪ ಪೂಜಾರಿ |
| ವಯಸ್ಸು | : | 49 ವರ್ಷ |
| ಉದ್ಯೋಗ | : | ನಿರ್ವಾಹಕ |
| ವಾಸ ಸ್ಥಳ | : | ಸಾಹೇಬ್ರಕಟ್ಟೆ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಸಾಕ್ಷಿಗೆ ನಿಪಿ-8 ನ್ನು ತೋರಿಸಿದ್ದು ಆತ ಸದ್ರಿ ವಾಹನದ ನಿಯಂತ್ರಕನಾಗಿ 2021ರಲ್ಲಿ ಕೆಲಸ ಮಾಡುತ್ತಿದ್ದು, ಚಾಲಕನಾಗಿ ಅರವಿಂದ ಎಂಬುವರರು ಕೆಲಸ ಮಾಡುತ್ತಿದ್ದರು. ಸದ್ರಿ ಬಸ್ಸಿನಲ್ಲಿ 3 ವರ್ಷ ಕೆಲಸ ಮಾಡಿರುತ್ತೇನೆ. ಸದ್ರಿ ಬಸ್ಸಿನ ನಂಬ್ರ ಕೆಎ-20-ಡಿ-7017 ಆಗಿರುತ್ತದೆ. ಮಾರನೇ ದಿನ ನಾನು ರಜೆ ಮುಗಿಸಿ ಕೆಲಸಕ್ಕೆ ಬಂದಾಗ ಸದ್ರಿ ಬಸ್ಸು ಅಪಘಾತವಾಗಿರುವುದು ತಿಳಿದು ಬಂದಿರುತ್ತದೆ. ಅಪಘಾತದಿಂದ ಬೈಕಿನ ಸವಾರರೊಬ್ಬರು ಸ್ಥಳದಲ್ಲಿ ಮೃತಪಟ್ಟಿರುವ ಬಗ್ಗೆ ತಿಳಿದು ಬಂದಿರುತ್ತದೆ. ಸ್ಥಳ ಕೊಟೇಶ್ವರ ಬೈಪಾಸಿನಿಂದ ಸ್ವಲ್ಪ ಮುಂದೆ ಎಂದು ಗೊತ್ತಾಗಿರುತ್ತದೆ. ಪೊಲೀಸರು ನನ್ನನ್ನು ವಿಚಾರಣೆ ಮಾಡಿ ಹೇಳಿಕೆ ಪಡೆದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ವಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ:20-02-2021ರ ಹೇಳಿಕೆಯನ್ನು ಸಾಕ್ಷಿಗೆ ಓದಿ ತಿಳಿಸಿದ್ದು ಅದನ್ನು ಸಾಕ್ಷಿ ಒಪ್ಪಿರುವುದಿಲ್ಲ. ಸದ್ರಿ ಹೇಳಿಕೆಯನ್ನು ನಿಪಿ-10 ಎಂದು ಗುರುತಿಸಲಾಯಿತು. ದಿ: 18-02-2021 ರಂದು ನ್ಯಾಯಾಲಯದ ಮುಂದೆ ಇರುವ ಆರೋಪಿ ಮೇಲೆ ನಾನು ಗುರುತಿಸಿದ ವಾಹನದ ಚಾಲಕನಾಗಿದ್ದು, ರಾತ್ರಿ 8-45ರ ಸಮಯದಲ್ಲಿ ಅತೀ ವೇಗ ಹಾಗೂ ಅಜಾಗರೂಕತೆಯಿಂದ

ಚಲಾಯಿಸಿಕೊಂಡು ಕೆಎ-20-ಇಬಿ-9759 ಬೈಕಿಗೆ ಡಿಕ್ಕಿ ಹೊಡೆದ ಪರಿಣಾಮ ಅದರ ಸವಾರ ತೀವ್ರವಾಗಿ ಗಾಯಗೊಂಡು ಮೃತಪಟ್ಟಿರುವ ವಿಚಾರ ನನಗೆ ತಿಳಿದಿರುತ್ತದೆ ಎಂದರೆ ಸರಿಯಲ್ಲ. ಆರೋಪಿ ನನ್ನ ಸಹೋದ್ಯೋಗಿಯಾಗಿದ್ದು ಆತನ ತಪ್ಪಿ ನಿಂದ ಅಪಘಾತವಾಗಿದ್ದರೂ ಆರೋಪಿ ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**